## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 978
ಸದಸ್ಯರ ಹೆಸರು : ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 19-12-2018
ಉತ್ತರಿಸುವ ಸಚಿವರು : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

*****

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯದಿಂದ ಇತ್ತೀಚೆಗೆ ಹೊರಡಿಸಲಾದ ಡಾ: ಕಸ್ತೂರಿರಂಗನ್ ವರದಿಯ ಅನುಷ್ಠಾನಕ್ಕೆ ಪಶ್ಚಿಮಘಟ್ಟ ಪ್ರದೇಶದಲ್ಲಿ ಪರಿಸರ ಸೂಕ್ಷ್ಮ ಪ್ರದೇಶ ಪ್ರಾಥಮಿಕ ಅಧಿಸೂಚನೆ ಬಗ್ಗೆ ರಾಜ್ಯ ಸರ್ಕಾರದ ನಿಲುವೇನು; | ಡಾ: ಕಸ್ತೂರಿರಂಗನ್ ವರದಿಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಅರಣ್ಯ, ಪರಿಸರ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ದಿನಾಂಕ :03.10.2018 ರಂದು ನಾಲ್ಕನೆಯ ಬಾರಿಗೆ ಕರಡು ಅಧಿಸೂಚನೆಯನ್ನು ಹೊರಡಿಸಿರುತ್ತದೆ ಮತ್ತು ಈ ಅಧಿಸೂಚನೆಗೆ ಆಕ್ಷೇಪಣೆ/ಸಹಮತಿಯನ್ನು ಸಲ್ಲಿಸಲು ನೀಡಲಾಗಿದ್ದ ಕಾಲಾವಕಾಶವನ್ನು ಕೇಂದ್ರ ಸರ್ಕಾರವು ದಿನಾಂಕ: 03.01.2019 ರವರೆಗೆ ವಿಸ್ತರಿಸಿರುತ್ತದೆ. ಈ ಅಧಿಸೂಚನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಆ) | ದಿನಾಂಕ 27.04.1978ರ ಪೂರ್ವದ ಅರಣ್ಯ ಭೂಮಿ ಸಕ್ರಮ ನಿಯಮದಡಿಯಲ್ಲಿ ಕೇಂದ್ರ ಸರ್ಕಾರದಿಂದ ಎಷ್ಟು ಪ್ರಕರಣಗಳಲ್ಲಿ ಎಷ್ಟು ಎಕರೆ ಅರಣ್ಯ ಭೂಮಿ ಈವರೆಗೆ ಬಿಡುಗಡೆ ಗೊಳಿಸಲಾಗಿರುತ್ತದೆ; ಎಷ್ಟು ಪ್ರಕರಣಗಳಲ್ಲಿ ಎಷ್ಟು ಎಕರೆ ಅರಣ್ಯ ಭೂಮಿ ಸಕ್ರಮಗೊಳಿಸಿ ಪಟ್ಟಿ ನೀಡಲಾಗಿರುತ್ತದೆ; | ದಿನಾಂಕ 27-4-1978 ರ ಪೂರ್ವದ ಅರಣ್ಯ ಭೂಮಿ ಸಕ್ರಮ ನಿಯಮದಡಿಯಲ್ಲಿ ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 8-50/95-ಎಫ್‌ಸಿ, ದಿನಾಂಕ 15-5-1996 ರನ್ವಯ 19,348 ಪ್ರಕರಣಗಳಲ್ಲಿ 14,848.73 ಹೆಕ್ಟೇರ್ ಅರಣ್ಯ ಭೂಮಿಯನ್ನು ಈವರೆಗೆ ಅನುಮೋದಿಸಲಾಗಿರುತ್ತದೆ. ಇದರಲ್ಲಿ 7,608 ಪ್ರಕರಣಗಳಲ್ಲಿ 5,060.99 ಹೆಕ್ಟೇರ್ ಅರಣ್ಯ ಭೂಮಿಯನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಸಕ್ರಮಗೊಳಿಸಿರುತ್ತಾರೆ. |
| ಇ) | ಕರ್ನಾಟಕ ಅರಣ್ಯ ಕಾಯ್ದೆ 1963ರ ಸೆಕ್ಷನ್ 4(1) ಪ್ರಕಾರ ಮೀಸಲು ಅರಣ್ಯ ಘೋಷಿಸುವ ಸಲುವಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದ್ದು ಈ ಪೈಕಿ ಎಷ್ಟು ಪ್ರಕರಣಗಳ ಬಗ್ಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಅಂತಿಮ ಅಧಿಸೂಚನೆಗೊಳಿಸದೆ ಅನೇಕ ವರ್ಷಗಳಿಂದ ವಿಲೇ ಇಡಲಾಗಿರುವ ಪ್ರಕರಣಗಳನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಮಾಹಿತಿ ನೀಡುವುದು) | ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 4(1) ರ ಪ್ರಕಾರ ಮೀಸಲು ಅರಣ್ಯ ಪ್ರದೇಶವನ್ನಾಗಿ ಘೋಷಿಸುವ ಉದ್ದೇಶಕ್ಕಾಗಿ ಒಟ್ಟು 1737 ಪ್ರಕರಣಗಳಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದ್ದು, ಅವುಗಳ ಪೈಕಿ 502 ಪ್ರಕರಣಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಉಳಿದಂತೆ 1235 ಪ್ರಸ್ತಾವನೆಗಳನ್ನು ನಿಯಮಾನುಸಾರ ಅಂತಿಮ ಅಧಿಸೂಚನೆಗೊಳಿಸುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |
| ಈ) | ಶಿವಮೊಗ್ಗ ಜಿಲ್ಲೆಯಲ್ಲಿ ಶರಾವತಿ ಯೋಜನೆ ಮುಳುಗಡೆ ಸಂತ್ರಸ್ತರಿಗೆ ಪುನರ್ ವಸತಿ ಹಾಗೂ ಪರಿಹಾರ ರೂಪವಾಗಿ ಎಷ್ಟು ಎಕರೆ ಭೂಮಿಯನ್ನು ಸರ್ಕಾರದ ವತಿಯಿಂದ ನೀಡಲಾಗಿರುತ್ತದೆ; ಈ ಪೈಕಿ ಎಷ್ಟು ಎಕರೆ | ಶಿವಮೊಗ್ಗ ಜಿಲ್ಲೆಯಲ್ಲಿ ಶರಾವತಿ ಯೋಜನೆ ಮುಳುಗಡೆ ಸಂತ್ರಸ್ತರಿಗೆ ಪುನರ್ ವಸತಿ ಹಾಗೂ ಪರಿಹಾರ ರೂಪವಾಗಿ 6303-12 ಎಕರೆ ಅರಣ್ಯ ಪ್ರದೇಶವನ್ನು ಅರಣ್ಯ ಇಲಾಖೆ ವತಿಯಿಂದ ನಿಯಮಾನುಸಾರ ಡೀನೋಟಿಫೈ ಮಾಡಿ ಅಧಿಸೂಚನೆ |

| | | |
|---|---|---|
| | ಅರಣ್ಯ ಭೂಮಿಯನ್ನು ಸರ್ಕಾರದ ವತಿಯಿಂದ 'ಡಿ' ನೋಟಿಫಿಕೇಷನ್ ಹಾಗೂ 'ಡಿ' ರಿಸರ್ವ್ ಪ್ರಕ್ರಿಯೆ ಪೂರ್ಣಗೊಳಿಸಿ ಅವರಿಗೆ ಪೂರ್ಣ ಪ್ರಮಾಣದ ಹಕ್ಕುದಾರಿಕೆಯನ್ನು ನೀಡಲಾಗಿರುತ್ತದೆ; ವಿಳಂಬವಾದಲ್ಲಿ ಕಾರಣವೇನು; | ಹೊರಡಿಸಲಾಗಿರುತ್ತದೆ. ಸದರಿ ಪ್ರದೇಶಗಳಿಗೆ ಸಂಬಂಧಿಸಿದಂತೆ ಪೂರ್ಣ ಪ್ರಮಾಣದ ಹಕ್ಕುದಾರಿಕೆಯನ್ನು ನೀಡುವ ಪ್ರಕ್ರಿಯೆಯು ಕಂದಾಯ ಇಲಾಖೆಗೆ ಸಂಬಂಧಿಸಿದ ವಿಷಯವಾಗಿರುತ್ತದೆ. |
| ಉ) | ಅರಣ್ಯ ಭೂಮಿ ಇಂಡೀಕರಣ ನಿಯಮ ಹಾಗೂ ವಿವಿಧ ಭೂ ಮಂಜೂರಾತಿ ನಿಯಮಗಳಡಿಯಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಈ ಹಿಂದೆ ಎಷ್ಟು ಎಕರೆ ಭೂಮಿಯನ್ನು ಮಂಜೂರು ಮಾಡಲಾಗಿರುತ್ತದೆ; ಪ್ರಸ್ತುತ ಸದರಿ ಭೂಮಿಗಳನ್ನು ಅಧಿಸೂಚಿತ ಅರಣ್ಯ ಪ್ರದೇಶಗಳ ವ್ಯಾಪ್ತಿಯಲ್ಲಿ ಬರುವ ಕಾರಣ ನೀಡಿ ಕಂದಾಯ ದಾಖಲೆಗಳಲ್ಲಿ ಅರಣ್ಯ ಇಲಾಖೆಗೆ ಹಕ್ಕು ವರ್ಗಾವಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; 1980ರ ಅರಣ್ಯ ಸಂರಕ್ಷಣಾ ಕಾಯ್ದೆ ಜಾರಿಗೆ ಬರುವ ಪೂರ್ವದಲ್ಲಿ ಮಂಜೂರು ಮಾಡಲಾದ ಪ್ರಕರಣಗಳು ಸಹ ಒಳಪಟ್ಟಿವೆಯೇ? | ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 2,18,832.67 ಹೆಕ್ಟೇರ್ ಅರಣ್ಯ ಭೂಮಿ ಕಂದಾಯ ಇಲಾಖೆಯ ಪಹಣಿ ದಾಖಲೆಯಲ್ಲಿ ಇಂಡೀಕರಣ ವಾಗಿರುತ್ತದೆ.<br><br>ಅರಣ್ಯ ಇಲಾಖೆಯಲ್ಲಿ ಲಭ್ಯವಿರುವ ದಾಖಲೆಗಳ ಪ್ರಕಾರ ಶಿವಮೊಗ್ಗ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಿಂದ 4,501.66 ಹೆ. ಅರಣ್ಯ ಭೂಮಿಯನ್ನು ಮಂಜೂರು ಮಾಡಲಾಗಿರುತ್ತದೆ. ಪ್ರಸ್ತುತ, ಕಂದಾಯ ಇಲಾಖೆಯಿಂದ ಮಾಡಲಾದ ಅರಣ್ಯ ಭೂಮಿಯ ಮಂಜೂರಾತಿಯನ್ನು ರದ್ದುಗೊಳಿಸಲು ಶಿವಮೊಗ್ಗ ಜಿಲ್ಲಾಧಿಕಾರಿಯವರಿಗೆ ಪತ್ರ ಬರೆಯಲಾಗಿದ್ದು, ಮಾಹಿತಿಯು ಸ್ವೀಕೃತವಾದ ನಂತರ ನಿಯಮಾನುಸಾರ ಮುಂದಿನ ಸೂಕ್ತ ಕ್ರಮ ವಹಿಸಲಾಗುವುದು ಮತ್ತು 1980 ರ ಅರಣ್ಯ ಸಂರಕ್ಷಣಾ ಕಾಯ್ದೆ ಜಾರಿಗೆ ಬರುವ ಪೂರ್ವದಲ್ಲಿ ಮಂಜೂರಾದ ಅರಣ್ಯ ಭೂಮಿ ಪ್ರಕರಣಗಳೂ ಕೂಡ ಇದರಲ್ಲಿ ಒಳಪಟ್ಟಿರುತ್ತವೆ. |

ಸಂಖ್ಯೆ: ಎಫ್‌ಇಇ 89 ಎಫ್‌ಎಲ್‌ಎಲ್ 2018

(ಆರ್. ಶಂಕರ್)
ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರು